ಶಿಕ್ಷಕರ ವರ್ಗಾವಣೆ

106 (539) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತೀರ್ಥಹಳ್ಳಿ ಮತ್ತು ಹೊಸನಗರ ತಾಲ್ಲೂಕಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶಿಕ್ಷಕರನ್ನು ಈ ಸಾಲಿನಲ್ಲಿ ವರ್ಗಾವಣೆ ಮಾಡಲಾಗಿದೆಯೇ

ಆ) ವರ್ಗಾವಣೆ ಆದರೂ ಬಿಡುಗಡೆ ಆಗದೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು ಈ ಶಿಕ್ಷಕರು ಇಲ್ಲಿಂದ ಬಿಡುಗಡೆ ಆಗುವವರೆಗೆ ಸದರಿ ಶಿಕ್ಷಕರ ಸ್ಥಾನಗಳನ್ನು ಕಾಯ್ದಿರಿಸಲಾಗುವುದೇ

ಇ) ಬದಲಿ ಶಿಕ್ಷಕರ ನೇಮಕ ಯಾವಾಗ ಮಾಡಲಾಗುತ್ತದೆ

ಈ) ಈ ವರ್ಗಾವಣೆ ಪ್ರಕ್ರಿಯೆಗಿಂತ ಮುಂಚಿನಿಂದಲೇ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು, ಇವನ್ನು ಯಾವಾಗ ಭರ್ತಿ ಮಾಡಲಾಗುವುದು?

ಪ್ರೋ॥ ಬಿ ಕೆ ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಹೌದು

ಆ) ವರ್ಗಾವಣೆ ಆದರೂ ಬಿಡುಗಡೆ ಆಗದೇ ಇರುವ ಶಿಕ್ಷಕರ ಸಂಖ್ಯೆ ಈ ಕೆಳಗಿನಂತಿದೆ ಸದರಿ ಶಿಕ್ಷಕರ ಸ್ಥಾನವನ್ನು ಕಾಯ್ದಿರಿಸಲಾಗುವುದಿಲ್ಲ

		ಪ್ರಾಥಮಿಕ	ಪ್ರೌಢ ಶಿಕ್ಷಣ
1	ಹೊಸನಗರ	22	ಇಲ್ಲ
2	ತೀರ್ಥಹಳ್ಳಿ	87	ಇಲ್ಲ

ಇ) ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಬಗ್ಗೆ ತಾತ್ಕಾಲಿಕ ಪಟ್ಟಿ ಪ್ರಕಟಿಸಿದ್ದು, ಅಂತಿಮ ಆಯ್ಕೆ ಪಟ್ಟಿಯನ್ನು ಶೀಘ್ರದಲ್ಲೇ ಪ್ರಕಟಿಸಿ ನೇಮಕಾತಿ ಆದೇಶಗಳನ್ನು ನೀಡಲಾಗುವುದು

ಈ) ಈ ವರ್ಗಾವಣೆ ಪ್ರಕ್ರಿಯೆಗಿಂತ ಮುಂಚಿನಿಂದಲೇ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಗಿನಂತಿದೆ ಈ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಪ್ರಶ್ನೆ 'ಇ' ನಲ್ಲಿ ಉತ್ತರಿಸಿದೆ

		ಪ್ರಾಥಮಿಕ	ಪ್ರೌಢ ಶಿಕ್ಷಣ
1	ಹೊಸನಗರ	182	ಇಲ್ಲ
2	ತೀರ್ಥಹಳ್ಳಿ	122	ಇಲ್ಲ

ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಹಾಸಿಗೆಗಳ ಸಂಖ್ಯೆಯ ಹೆಚ್ಚಳ

107 (517) ಶ್ರೀ ಆತ್ಮಾನಂದ ಎಂ ಎಸ್ (ಮಂಡ್ಯ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗ ಉತ್ತರಿಸುವರೆ?

ಅ) ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿನ ಹಾಸಿಗೆಗಳ ಸಂಖ್ಯೆಯನ್ನು 500 ಹಾಸಿಗೆಗಳ ಸಂಖ್ಯೆಗೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ

ಆ) ಹಾಗಿದ್ದಲ್ಲಿ ಈ ಪ್ರಸ್ತಾವನೆಗೆ ಅನುಮೋದನೆ ನೀಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?